**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ (ಆಸು) 172 ಸ್ವೀಮರ 2026

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:02.07.2026

## ಸುತ್ತೋಲೆ

**ವಿಷಯ:** ರಾಜ್ಯದಲ್ಲಿ ಹೊಸದಾಗಿ ಪ್ರಜಾಸೇವಾ ಇಲಾಖೆಯನ್ನು ಸ್ಥಾಪಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 225 ಸಲುಸೇ 2026, ದಿನಾಂಕ: 24.06.2026.

******

ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 225 ಸಲುಸೇ 2026, ದಿನಾಂಕ:24.06.2026 ರಲ್ಲಿ ಕರ್ನಾಟಕ ಸರ್ಕಾರವು ರಾಜ್ಯ ಸರ್ಕಾರದಲ್ಲಿ ಆಡಳಿತಾತ್ಮಕ ದಕ್ಷತೆಯನ್ನು ಹೆಚ್ಚಿಸಲು ಮತ್ತು ಸಾರ್ವಜನಿಕರ ಅಹವಾಲುಗಳನ್ನು ಒಂದೇ ಸೂರಿನಡಿ ತ್ವರಿತವಾಗಿ ವಿಲೇವಾರಿ ಮಾಡಲು **"ಪ್ರಜಾಸೇವಾ ಇಲಾಖೆ"** ಎಂಬ ಹೊಸ ಇಲಾಖೆಯನ್ನು ಸ್ಥಾಪಿಸಲಾಗಿರುತ್ತದೆ. ಅದರಂತೆ ಪ್ರಸ್ತುತ ಇರುವ **ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ)** ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಯ ಅಧೀನದಲ್ಲಿ ಬರುವ **ಸಕಾಲ ಮಿಷನ್ ಮತ್ತು ದೂರುಗಳು ಮತ್ತು ಕೊಂದುಕೊರತೆಗಳ ವಿಭಾಗಗಳು** ಹೊಸದಾಗಿ ಸ್ಥಾಪಿತವಾಗಿರುವ ಪ್ರಜಾಸೇವಾ ಇಲಾಖೆಯಲ್ಲಿ ವಿಲೀನಗೊಂಡಿರುತ್ತವೆ. ಆದ್ದರಿಂದ ಇನ್ನು ಮುಂದೆ ಈ ವಿಷಯಗಳಿಗೆ ಸಂಬಂಧಿಸಿದ ಎಲ್ಲಾ ಪತ್ರ ವ್ಯವಹರಣೆಗಳಿಗಾಗಿ ಈ ಕೆಳಕಂಡ ಪ್ರಾಧಿಕಾರ ಮತ್ತು ವಿಳಾಸವನ್ನು ಸಂಪರ್ಕಿಸುವುದು.

ಸರ್ಕಾರದ ಪ್ರಧಾನ ಕಾರ್ಯದರ್ಶಿ
ಪ್ರಜಾಸೇವಾ ಇಲಾಖೆ
ಕೊಠಡಿ ಸಂಖ್ಯೆ:612, 6ನೇ ಮಹಡಿ
1ನೇ ಹಂತ, ಬಹುಮಹಡಿಗಳ ಕಟ್ಟಡ
ಬೆಂಗಳೂರು-560001
ದೂರವಾಣಿ ಸಂಖ್ಯೆ: 080-22032825/080-22353985

02/07/2026

**(ವಿಮಲಾಕ್ಷಿ.ಬಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಸು-ತಪಾಸಣೆ ಮತ್ತು ಸ್ವೀಮರ)

**ಇವರಿಗೆ:**

1. ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
2. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
3. ಮಾನ್ಯ ಉಪ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
4. ಗೌರವಾನ್ವಿತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ಲೋಕಭವನ, ಬೆಂಗಳೂರು.
5. ಮಾನ್ಯ ಸಚಿವರುಗಳ ಎಲ್ಲಾ ಆಪ್ತ ಕಾರ್ಯದರ್ಶಿಗಳು.

...2

Scanned with OKEN Scanner